(ಈ) ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕ, 1998

ಶ್ರೀ ಸಿದ್ದರಾಮಯ್ಯ (ಉಪಮುಖ್ಯ ಮಂತ್ರಿಗಳು) (ಸಾರಿಗೆ ಮಂತ್ರಿಗಳ ಪರವಾಗಿ) :- ಮಾನ್ಯ ಅಧ್ಯಕ್ಷರೆ, 1998ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ(ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು :- ಪ್ರಸ್ತಾವ ಏನೆಂದರೆ, '' 1998ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿಗಳು) :- ಮಾನ್ಯ ಅಧ್ಯಕ್ಷರೆ, 1998ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು :- ಅನುಬಂಧ - III & IV ವಿಧೇಯಕವನ್ನು ಮಂಡಿಸಲಾಗಿದೆ

(ಐ) ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

(ಅ) ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕ, 1998

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿಗಳು):- ಮಾನ್ಯ ಅಧ್ಯಕ್ಷರೆ, 1998ರ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು :- ಪ್ರಸ್ತಾವ ಏನೆಂದರೆ, '' 1998ರ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಪರ್ಯಾಲೋಚಿಸುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ಮತ್ತು 3

ಅಧ್ಯಕ್ಷರು :- ''ಖಂಡ 2 ಮತ್ತು 3 ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ಮತ್ತು 3 ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು :- ಪ್ರಸ್ತಾವ ಏನೆಂದರೆ, ''ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿದೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿಗಳು) :-ಮಾನ್ಯ ಅಧ್ಯಕ್ಷರೆ, 1998ರ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು :- ಪ್ರಸ್ತಾವ ಏನೆಂದರೆ, ''1998ರ ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕವನ್ನು ಅಂಗೀಕರಿಸುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

(ಅ) ಕರ್ನಾಟಕ ಧನವಿನಿಯೋಗ ವಿಧೇಯಕ 1998

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿಗಳು) :- ಮಾನ್ಯ ಅಧ್ಯಕ್ಷರೆ, 1998ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು :- ಪ್ರಸ್ತಾವ ಏನೆಂದರೆ,'' 1998ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಪರ್ಯಾಲೋಚಿಸುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ಮತ್ತು 3

ಅಧ್ಯಕ್ಷರು :-'' ಖಂಡ 2 ಮತ್ತು 3 ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು